# All India Radio: Bangalore
# National Bulletin In Kannada
# 29.04.2026  19.35 p.m.
## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 29.04.2026  19.35 p.m.
****************

**ಮುಖ್ಯಾಂಶಗಳು**

1. ಪಶ್ಚಿಮ ಬಂಗಾಳ ಅಂತಿಮ ಹಂತದ ಚುನಾವಣೆ; ದಾಖಲೆ ಮತದಾನ
2. ಪ್ರಧಾನಿ ನರೇಂದ್ರ ಮೋದಿ ಅವರಿಂದ ಉತ್ತರ ಪ್ರದೇಶದಲ್ಲಿ ಗಂಗಾ ಎಕ್ಸ್‌ಪ್ರೆಸ್ ವೇ ಲೋಕಾರ್ಪಣೆ
3. ಕಾಂಬೋಡಿಯಾ ನಿಯೋಗದೊಂದಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ದ್ವಿಪಕ್ಷೀಯ ಮಾತುಕತೆ
4. ಐಪಿಎಲ್ ಟಿ–20 ಕ್ರಿಕೆಟ್: ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಬ್ಯಾಟಿಂಗ್ ಆಯ್ಕೆ

---

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಎರಡನೇ ಹಾಗೂ ಅಂತಿಮ ಹಂತದ ಮತದಾನ ಇಂದು ಸಂಪನ್ನವಾಯಿತು.

ಕೇಂದ್ರ ಚುನಾವಣಾ ಆಯೋಗದ ಮಾಹಿತಿ ಪ್ರಕಾರ, ದಾಖಲೆಯ ಶೇಖಡ 91.57 ರಷ್ಟು ಮತದಾನವಾಗಿದೆ.

ಎರಡನೇ ಹಂತದಲ್ಲಿ ಕೋಲ್ಕತ್ತಾ ಉತ್ತರ, ಕೋಲ್ಕತ್ತಾ ದಕ್ಷಿಣ, ಹೌರಾ, ನಾಡಿಯಾ, ಉತ್ತರ 24 ಪರಗಣ, ದಕ್ಷಿಣ 24 ಪರಗಣ, ಹೂಗ್ಲಿ ಮತ್ತು ಪುರ್ಬಾ ಬರ್ಧಮಾನ್ ಸೇರಿದಂತೆ ಎಂಟು ಜಿಲ್ಲೆಗಳಲ್ಲಿ ಮತದಾನವಾಗಿದೆ.

142 ವಿಧಾನಸಭಾ ಸ್ಥಾನಗಳಿಗೆ ಒಟ್ಟು ಒಂದು ಸಾವಿರದ 448 ಅಭ್ಯರ್ಥಿಗಳು ಕಣದಲ್ಲಿದ್ದರು.

ಕೇರಳ, ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಪುದುಚೇರಿ ವಿಧಾನಸಭೆಗಳ ಮತ ಎಣಿಕೆ ಕಾರ್ಯ ಮೇ 4 ರಂದು ನಡೆಯಲಿದೆ.

---

ಉತ್ತರ ಪ್ರದೇಶದ ಹರ್ದೋಯಿ ಜಿಲ್ಲೆಯಲ್ಲಿ 594 ಕಿಲೋಮೀಟರ್ ಉದ್ದದ ಗಂಗಾ ಎಕ್ಸ್‌ಪ್ರೆಸ್ ವೇ ಅನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಿದರು.

ಈ ವೇಳೆ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸಾವಿರಾರು ವರ್ಷಗಳಿಂದ ಗಂಗಾ ನದಿಯು ಉತ್ತರ ಪ್ರದೇಶದ ಜೀವನಾಡಿಯಾಗಿರುವಂತೆ, ಈ ಎಕ್ಸ್‌ಪ್ರೆಸ್ ವೇ ಕೂಡ ಈ ರಾಜ್ಯದ ಅಭಿವೃದ್ಧಿಯ ಹೊಸ ಜೀವನಾಡಿಯಾಗಲಿದೆ ಎಂದು ಹೇಳಿದರು.

ಈ ಹೈಸ್ಪೀಡ್ ಕಾರಿಡಾರ್ ಉತ್ತರ ಪ್ರದೇಶಾದ್ಯಂತ ಸಂಪರ್ಕವನ್ನು ಗಮನಾರ್ಹವಾಗಿ ಹೆಚ್ಚಿಸುವ ನಿರೀಕ್ಷೆ ಇದೆ. ಜೊತೆಗೆ ಕೈಗಾರಿಕಾ ಹೂಡಿಕೆ, ಲಾಜಿಸ್ಟಿಕ್ಸ್, ಕೃಷಿ ಮಾರುಕಟ್ಟೆ ಮತ್ತು ಪ್ರಾದೇಶಿಕ ಸಮತೋಲನಕ್ಕೆ ವೇಗವನ್ನು ನೀಡುತ್ತದೆ. ಉತ್ತರ ಪ್ರದೇಶ ಎಕ್ಸ್‌ಪ್ರೆಸ್ ವೇಸ್ ಕೈಗಾರಿಕಾ ಅಭಿವೃದ್ಧಿ ಪ್ರಾಧಿಕಾರದಿಂದ ಗಂಗಾ ಎಕ್ಸ್‌ಪ್ರೆಸ್ ವೇ ಅಭಿವೃದ್ಧಿ ಪಡಿಸಲಾಗಿದೆ. ಇದು ರಾಜ್ಯದ ಪಶ್ಚಿಮ, ಮಧ್ಯ, ಪೂರ್ವ ಪ್ರದೇಶಗಳನ್ನು ಸಂಪರ್ಕಿಸುತ್ತದೆ; ಅಲ್ಲದೇ ರಾಜ್ಯದ ಅತಿ ಉದ್ದದ ಎಕ್ಸ್‌ಪ್ರೆಸ್ ವೇ ಆಗಿದೆ. ಇದು ಮೀರತ್ ಮತ್ತು ಪ್ರಯಾಗ್‌ರಾಜ್ ನಡುವಿನ ಪ್ರಯಾಣದ ಸಮಯವನ್ನು ಸುಮಾರು 12 ಗಂಟೆಗಳಿಂದ 6 ಗಂಟೆಗೆ ತಗ್ಗಿಸಲಿದೆ.

ಇದಕ್ಕೂ ಮುನ್ನ, ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ ಕಾಶಿ ವಿಶ್ವನಾಥ ದೇಗುಲಕ್ಕೆ ಭೇಟಿ ನೀಡಿ ಪೂಜೆ ನೆರವೇರಿಸಿದರು. ಅಲ್ಲದೇ ದೇವಾಲಯದ ಆವರಣದಲ್ಲಿದ್ದ ಕೆಲವು ಭಕ್ತರೊಂದಿಗೆ ಸಂವಾದ ನಡೆಸಿದರು.

---

ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ನವದೆಹಲಿಯಲ್ಲಿ ಇಂದು ಕಾಂಬೋಡಿಯಾದ ಗಣಿ ಮತ್ತು ಇಂಧನ ಸಚಿವ ಕಿಯೋ ರೊಟ್ಟಾನಕ್ ನೇತೃತ್ವದ ನಿಯೋಗವನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.

ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತದ ಕ್ಷಿಪ್ರ ಬೆಳವಣಿಗೆಯನ್ನು ಕಾಂಬೋಡಿಯಾ ನಿಯೋಗ ಶ್ಲಾಘಿಸಿದೆ. ನೀರಾವರಿಯಲ್ಲಿ ನವೀಕರಿಸಬಹುದಾದ ಇಂಧನ ಪರಿಹಾರಗಳನ್ನು ಅಳವಡಿಸಿಕೊಳ್ಳುವಲ್ಲಿ, ಸಹಯೋಗ ನೀಡಲು ಹೆಚ್ಚಿನ ಆಸಕ್ತಿವಹಿಸಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಇದೇ ವೇಳೆ ಪಿಎಂ ಕುಸುಮ್ ಮತ್ತು ಪಿಎಂ ಸೂರ್ಯಘರ್ ನಂತಹ ಉಪಕ್ರಮಗಳಡಿ ಭಾರತ ಸಾಧಿಸಿರುವ ಪ್ರಗತಿಯನ್ನು ಕಾಂಬೋಡಿಯಾ ನಿಯೋಗ ಶ್ಲಾಘಿಸಿದ್ದು, ಎರಡೂ ದೇಶಗಳ ನಡುವೆ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಸಭೆಯಲ್ಲಿ ಚರ್ಚಿಸಲಾಯಿತು ಎಂದು ಅವರು ವಿವರಿಸಿದ್ದಾರೆ.

---

ಅನಿಶ್ಚಿತತೆಯ ಜಗತ್ತಿನಲ್ಲಿ ರಾಷ್ಟ್ರೀಯ ಹಿತಾಸಕ್ತಿಗಳನ್ನು ಮುನ್ನಡೆಸಲು ಮತ್ತು ರಾಷ್ಟ್ರೀಯ ಗುರಿಗಳನ್ನು ಸಾಧಿಸಲು ಭಾರತೀಯ ರಾಜತಾಂತ್ರಿಕತೆ ಸನ್ನದ್ಧವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ಸಮ್ಮೇಳನದಲ್ಲಿ ಭಾರತದ ಹೈಕಮಿಷನರ್‌ಗಳು ರಾಯಭಾರಿಗಳು ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹಿರಿಯ ಅಧಿಕಾರಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಕಳೆದ ದಶಕದಲ್ಲಿ ವಿಶ್ವದೊಂದಿಗೆ ಭಾರತದ ಒಡನಾಟವು ಗಣನೀಯವಾಗಿ ವಿಸ್ತರಿಸಲ್ಪಟ್ಟಿರುವುದನ್ನು ಈ ಸಂವಾದ ಗುರುತಿಸಿದೆ ಎಂದು ಇದೇ ವೇಳೆ ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಅಭಿಪ್ರಾಯಪಟ್ಟಿದ್ದಾರೆ.

---

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ನವದೆಹಲಿಯಲ್ಲಿ ಇಂದು ಈಕ್ವೆಡಾರ್ ಗಣರಾಜ್ಯದ ವಿದೇಶಾಂಗ ವ್ಯವಹಾರಗಳ ಸಚಿವೆ ಮರಿಯಾ ಗೇಬ್ರಿಯಲ್ ರೊಸೆರೊ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

ಸಭೆಯಲ್ಲಿ ಉಭಯ ನಾಯಕರು ಭಾರತ ಮತ್ತು ಈಕ್ವೆಡಾರ್ ನಡುವಿನ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಚರ್ಚಿಸಿದರು. ಅಲ್ಲದೇ, ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಆರೋಗ್ಯ ಸಹಕಾರವನ್ನು ಹೆಚ್ಚಿಸುವ ಕುರಿತು ಚರ್ಚೆ ನಡೆಯಿತು ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ.

---

ಕೀನ್ಯಾದ ನೈರೋಬಿಯಾದಲ್ಲಿ 10ನೇ ಭಾರತ–ಕೀನ್ಯಾ ಜಂಟಿ ವ್ಯಾಪಾರ ಸಮಿತಿ ಸಭೆ ನಡೆಯಿತು. ಭಾರತದ ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರ್‌ವಾಲ್ ಮತ್ತು ಕೀನ್ಯಾದ ವಾಣಿಜ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರೆಜಿನಾ ಅಕೋಟಾ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಉಭಯ ದೇಶಗಳ ನಡುವೆ ದ್ವಿಪಕ್ಷೀಯ ವ್ಯಾಪಾರ ಮತ್ತು ಆರ್ಥಿಕ ಸಹಕಾರ ಬಲಪಡಿಸುವ ನಿಟ್ಟಿನಲ್ಲಿ ಸಭೆಯಲ್ಲಿ ಚರ್ಚಿಸಲಾಯಿತು.

ಕಳೆದ ಹಣಕಾಸು ವರ್ಷದಲ್ಲಿ ಭಾರತ ಮತ್ತು ಕೀನ್ಯಾ ನಡುವಿನ ಒಟ್ಟು ವ್ಯಾಪಾರವು 4.31 ಶತಕೋಟಿ ಡಾಲರ್ ಆಗಿದ್ದು, ಇದು 2024–25ಕ್ಕೆ ಹೋಲಿಸಿದರೆ, ಶೇಕಡ 24.91 ರಷ್ಟು ಹೆಚ್ಚಳವನ್ನು ದಾಖಲಿಸಿದೆ.

ಈ ಸಂದರ್ಭದಲ್ಲಿ ಭಾರತೀಯ ಗುಣಮಟ್ಟ ಬ್ಯೂರೊ–ಬಿಐಎಸ್ ಮತ್ತು ಕೀನ್ಯಾ ಬ್ಯೂರೋ ಆಫ್ ಸ್ಟ್ಯಾಂಡರ್ಡ್ಸ್ ನಡುವೆ ತಿಳಿವಳಿಕಾ ಒಪ್ಪಂದಕ್ಕೆ ಸಹಿ ಹಾಕಲಾಯಿತು.

---

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ನಾಳೆ ಇಟಲಿ ರಕ್ಷಣಾ ಸಚಿವ ಗೈಡೋ ಕ್ರೋಸೆಟ್ಟೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ಸಭೆಯಲ್ಲಿ ಉಭಯ ನಾಯಕರು ಎರಡೂ ದೇಶಗಳ ನಡುವಿನ ರಕ್ಷಣಾ ಸಹಕಾರಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಬಗ್ಗೆ ಚರ್ಚಿಸಲಿದ್ದಾರೆ. ಅಲ್ಲದೆ, ಬದಲಾಗುತ್ತಿರುವ ಭದ್ರತಾ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅವರು ತಮ್ಮ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳುವ ನಿರೀಕ್ಷೆಯಿದೆ.

2023 ರ ಅಕ್ಟೋಬರ್‌ನಲ್ಲಿ ರಕ್ಷಣಾ ಸಚಿವರು ರೋಮ್‌ಗೆ ಭೇಟಿ ನೀಡಿದ ನಂತರ ಭಾರತ ಮತ್ತು ಇಟಲಿ ನಡುವಿನ ರಕ್ಷಣಾ ಸಹಕಾರ ಮತ್ತಷ್ಟು ವೇಗವನ್ನು ಪಡೆದುಕೊಂಡಿದೆ. ಇದು ಇಟಲಿಯ ರಕ್ಷಣಾ ಸಚಿವರ ಮೊದಲ ಭಾರತ ಪ್ರವಾಸವಾಗಿದೆ.

2026 ರ ಜನವರಿಯಲ್ಲಿ 'ಭಾರತ–ಐರೋಪ್ಯ ಒಕ್ಕೂಟ  ರಕ್ಷಣಾ ಮತ್ತು ವ್ಯೂಹಾತ್ಮಕ ಪಾಲುದಾರಿಕೆ'ಗೆ ಸಹಿ ಹಾಕಿರುವುದು ಬೆಳೆಯುತ್ತಿರುವ ಕಾರ್ಯತಂತ್ರದ ಒಮ್ಮತವನ್ನು ಪ್ರತಿಬಿಂಬಿಸುತ್ತದೆ ಮತ್ತು ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ರಕ್ಷಣಾ ಕೈಗಾರಿಕಾ ಸಹಕಾರಕ್ಕೆ ಹೆಚ್ಚಿನ ಉತ್ತೇಜನ ನೀಡಿದೆ.

---

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಾಳೆ ಜಮ್ಮುವಿನ ತಾವಿ ರೈಲು ನಿಲ್ದಾಣದಿಂದ ಶ್ರೀನಗರ–ಕಟ್ರಾ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಗೆ ಚಾಲನೆ ನೀಡಲಿದ್ದಾರೆ.

ಇದೇ ವೇಳೆ ಉಧಂಪುರ–ಶ್ರೀನಗರ–ಬಾರಾಮುಲ್ಲಾ ರೈಲು ಸಂಪರ್ಕ ಮಾರ್ಗದಲ್ಲಿ ಅಂಜಿ ಸೇತುವೆ ಮತ್ತು ಚೆನಾಬ್ ಸೇತುವೆಯನ್ನು ಅವರು ಪರಿಶೀಲಿಸಲಿದ್ದಾರೆ.

ಈ ಹಿಂದೆ ಶ್ರೀನಗರದಿಂದ ಶ್ರೀ ಮಾತಾ ವೈಷ್ಣೋ ದೇವಿ ಕಟ್ರಾದವರೆಗೆ ಕಾರ್ಯನಿರ್ವಹಿಸುತ್ತಿದ್ದ ರೈಲು, ಈಗ ಜಮ್ಮು ತಾವಿಗೆ ಸಂಪೂರ್ಣವಾಗಿ ಚಲಿಸಲಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

ವಿಸ್ತೃತ ಜಮ್ಮು ತಾವಿ–ಶ್ರೀನಗರ ವಂದೇ ಭಾರತ್ ಎಕ್ಸ್‌ಪ್ರೆಸ್ ಮುಂದಿನ ತಿಂಗಳ ಎರಡನೇ ತಾರೀಖಿನಿಂದ ನಿಯಮಿತ ಸೇವೆ ಆರಂಭಿಸಲಿದೆ. ಹೆಚ್ಚುತ್ತಿರುವ ಜನಪ್ರಿಯತೆ ಮತ್ತು ಬೇಡಿಕೆಯನ್ನು ಪೂರೈಸಲು ವಂದೇ ಭಾರತ್ ಅನ್ನು ಎಂಟು ಬೋಗಿಗಳಿಂದ ಇಪ್ಪತ್ತು ಬೋಗಿಗಳಿಗೆ ಹೆಚ್ಚಿಸಲಾಗಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

---

ಪಶ್ಚಿಮ ಏಷ್ಯಾದ ಸಂಘರ್ಷದ ಹಿನ್ನೆಲೆಯಲ್ಲಿ ದೇಶೀಯ ಎಲ್‌ಪಿಜಿ ಸರಬರಾಜುಗಳಲ್ಲಿ ಯಾವುದೇ ಅಡೆತಡೆಯಿಲ್ಲದೆ ಸುಗಮವಾಗಿ ಮುಂದುವರೆದಿವೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

ನವದೆಹಲಿಯಲ್ಲಿ ನಡೆದ ಅಂತರ್–ಸಚಿವಾಲಯದ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಕಾರ್ಯದರ್ಶಿ ಸುಜಾತಾ ಶರ್ಮಾ, ಆನ್‌ಲೈನ್ ಎಲ್‌ಪಿಜಿ ಬುಕಿಂಗ್‌ಗಳು ಮತ್ತು ವಿತರಣಾ ದೃಢೀಕರಣ ಕೋಡ್ ಆಧಾರಿತ ದೇಶೀಯ ಎಲ್‌ಪಿಜಿ ಸರಬರಾಜುಗಳು ಸುಗಮವಾಗಿ ಸರಬರಾಜು ಆಗುತ್ತಿವೆ ಎಂದು ಹೇಳಿದರು.

ದೇಶಾದ್ಯಂತ ವಾಣಿಜ್ಯ ಎಲ್‌ಪಿಜಿ ಸರಬರಾಜು ಶೇಕಡಾ 70 ರಷ್ಟು ಸುಗಮವಾಗಿ ನಡೆಯುತ್ತಿದ್ದು, ಏಪ್ರಿಲ್ ತಿಂಗಳಲ್ಲಿ 1 ಲಕ್ಷ 84 ಸಾವಿರ ಟನ್‌ಗಳಿಗೂ ಹೆಚ್ಚು ವಾಣಿಜ್ಯ ಎಲ್‌ಪಿಜಿ ಮಾರಾಟವಾಗಿದೆ. ನಿನ್ನೆ ಮಂಗಳವಾರದವರೆಗೆ, 8 ಸಾವಿರ 838 ಟನ್‌ಗಳಿಗೂ ಹೆಚ್ಚು ವಾಣಿಜ್ಯ ಎಲ್‌ಪಿಜಿ ಮಾರಾಟವಾಗಿದೆ ಎಂದು ತಿಳಿಸಿದರು.

---

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ–20 ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಮತ್ತು ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

__________ಮುಕ್ತಾಯ__________